ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ:	1040
ಸದಸ್ಯರ ಹೆಸರು	ಶ್ರೀ. ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ:	10.03.2021
ಉತ್ತರಿಸುವ ಸಚಿವರು:	ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಇಲಾಖೆ

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
ಅ)	2018-19 ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಲೆ.ಶೀ 5054-04-337-0-01-154 ರಡಿ ನಾಗಮಂಗಲ ತಾಲ್ಲೂಕಿನ ಕಾಂತಾಪುರ ಮಾರ್ಗರಾಜ್ಯ ಹೆದ್ದಾರಿ-19 ನ್ನು(ಎನ್.ಹೆಚ್-150ಎ) ಅನ್ನು ಹೊಣಕೆರೆ ಬಳಿ ಸೇರುವ ಜಿಲ್ಲಾ ಮುಖ್ಯ ರಸ್ತೆ ಮತ್ತು ನಾಗಮಂಗಲ ತಾಲ್ಲೂಕು ದೇವಲಾಪುರ-ಮಾರ್ಕೋನಹಳ್ಳಿ ಸೇರುವ ಜಿಲ್ಲಾ ಮುಖ್ಯ ರಸ್ತೆಯ ರಾಜ್ಯ ಹೆದ್ದಾರಿ ಅಭಿವೃದ್ಧಿಪಡಿಸುವ ಕಾಮಗಾರಿಯು ರೂ.750.00 ಲಕ್ಷಗಳಿಗೆ ಮಂಜೂರಾಗಿದ್ದು, ಪ್ರಸ್ತುತ, ಕಾಮಗಾರಿ ಪೂರ್ಣಗೊಳಿಸಬೇಕಾದ ಸಮಯ ಮುಗಿದರೂ ಇನ್ನೂ ಕಾಮಗಾರಿ ಪೂರ್ಣಗೊಳ್ಳದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ	• ನಾಗಮಂಗಲ ತಾಲ್ಲೂಕಿನ 1)ಕೋಳಾಲ, ತುರುವೇಕೆರೆ, ದಬ್ಬೆಘಟ್ಟ, ಚಾಮಲಾಪುರ, ಅದ್ದಿಹಳ್ಳಿ, ಕಾಂತಾಪುರ ಮಾರ್ಗ ರಾಜ್ಯಹೆದ್ದಾರಿ 19 (ಎನ್.ಹೆಚ್-150ಎ) ಅನ್ನು ಹೊಣಕೆರೆ ಬಳಿ ಸೇರುವ ಜಿಲ್ಲಾ ಮುಖ್ಯ ರಸ್ತೆಯ ಸರಪಳಿ: 1.00 ರಿಂದ 5.50 ಕಿ.ಮೀ. ವರೆಗೆ ರಸ್ತೆ ಅಭಿವೃದ್ಧಿ ಕಾಮಗಾರಿ ಮತ್ತು 2)ದೇವಲಾಪುರ ಮಾರ್ಕೋನಹಳ್ಳಿ ಸೇರುವ ಜಿಲ್ಲಾ ಮುಖ್ಯ ರಸ್ತೆಯ ಸರಪಳಿ 1.40 ರಿಂದ 5.00 ಕಿ.ಮೀ. ವರೆಗೆ ರಸ್ತೆ ಅಭಿವೃದ್ಧಿಪಡಿಸಲು ರೂ.750.00 ಲಕ್ಷಗಳ ಮೊತ್ತದ ಪ್ಯಾಕೇಜ್ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ. • ಸದರಿ ಕಾಮಗಾರಿಯನ್ನು ನಿರ್ವಹಿಸಲು ಟೆಂಡರ್ ಕರೆದು ಗುತ್ತಿಗೆದಾರರನ್ನು ನಿಗದಿಪಡಿಸಿ, ದಿನಾಂಕ:14.09.2020 ರಂದು ಗುತ್ತಿಗೆದಾರರಿಗೆ ವಹಿಸಲಾಗಿರುತ್ತದೆ. ಕಾಮಗಾರಿಯನ್ನು ಕರಾರಿನ್ವಯ ದಿನಾಂಕ:13.03.2021ಕ್ಕೆ ಪೂರ್ಣಗೊಳಿಸ ಬೇಕಾಗಿರುತ್ತದೆ. • ಕಾಂತಾಪುರ ಮಾರ್ಗರಾಜ್ಯ ಹೆದ್ದಾರಿ-19(ಎನ್.ಹೆಚ್-150ಎ) ಅನ್ನು ಹೊಣಕೆರೆ ಬಳಿ ಸೇರುವ ಜಿಲ್ಲಾ ಮುಖ್ಯ ರಸ್ತೆಯಲ್ಲಿ ವೆಟ್‌ಮಿಕ್ಸ್ ಕಾಮಗಾರಿ ಮುಗಿದಿದ್ದು, ಡಾಂಬರೀಕರಣ ಕಾಮಗಾರಿಯನ್ನು ಮಾಡಬೇಕಾಗಿರುತ್ತದೆ. ಮತ್ತು ದೇವಲಾಪುರ-ಮಾರ್ಕೋನಹಳ್ಳಿ ರಸ್ತೆಯಲ್ಲಿ ಕಾಂಕ್ರೀಟ್ ಚರಂಡಿ ಕಾಮಗಾರಿ ಮುಗಿದಿದ್ದು, ಜಿ.ಎಸ್.ಬಿ ಕಾಮಗಾರಿ ಪ್ರಗತಿಯಲ್ಲಿರುತ್ತದೆ. ಆದರೆ ಪ್ರಸಕ್ತ ಸಾಲಿನಲ್ಲಿ ಕೋವಿಡ್-19 ರ ಹಿನ್ನಲೆಯಲ್ಲಿ ಕೆಲಸಗಾರರ ಕೊರತೆಯೊಂದಾಗಿ ಕಾಮಗಾರಿ ಪ್ರಗತಿ ತುಸು ಕುಂಠಿತವಾಗಿರುತ್ತದೆ. ಕುಂಠಿತ ಪ್ರಗತಿಯ ಬಗ್ಗೆ ಗುತ್ತಿಗೆದಾರರಿಗೆ ಉಪವಿಭಾಗ ಕಛೇರಿಯಿಂದ ಸದರಿ ಕಾಮಗಾರಿಗಳನ್ನು ಜರೂರು ಪೂರ್ಣಗೊಳಿಸುವಂತೆ ನೋಟೀಸ್ ನೀಡಲಾಗಿರುತ್ತದೆ. ಕಾಮಗಾರಿಯನ್ನು ತ್ವರಿತಗತಿಯಲ್ಲಿ ಕೈಗೊಂಡು ನಿಗಧಿತ ಅವಧಿಯೊಳಗೆ ಪೂರ್ಣಗೊಳಿಸಲು ಕ್ರಮ ವಹಿಸಲಾಗುತ್ತಿದೆ.

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
ಆ)	ಸದರಿ ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿದ್ದು, ಅಂದಾಜು ಪಟ್ಟಿಯಲ್ಲಿರುವಂತೆ ಕಾಮಗಾರಿ ಪೂರೈಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ ಗುಣಮಟ್ಟ ಪರಿಶೀಲಿಸಲು ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ (ವಿವರ ನೀಡುವುದು)	ಸದರಿ ಕಾಮಗಾರಿಯನ್ನು ಅನುಮೋದಿತ ಅಂದಾಜು ಪಟ್ಟಿಯಂತೆ ನಿರ್ವಹಿಸಲಾಗುತ್ತಿದ್ದು ಕಾಮಗಾರಿಯ ಪ್ರತಿ ಹಂತದಲ್ಲೂ ಗುಣ ಭರವಸೆ ಅಧಿಕಾರಿಗಳಿಂದ ಪರಿವೀಕ್ಷಣೆಗೊಳಪಡಿಸಿಕೊಂಡು ಫಲಿತಾಂಶ ವರದಿಯನ್ನು ಪಡೆದು ಕಾಮಗಾರಿಯನ್ನು ನಿರ್ವಹಿಸಲಾಗುತ್ತಿದೆ. ಕಾಮಗಾರಿ ಕರಾರಿನನ್ವಯ ದಿನಾಂಕ:13.03.2021ಕ್ಕೆ ಪೂರ್ಣಗೊಳಿಸಬೇಕಾಗಿದ್ದು, ಸಾರ್ವಜನಿಕರಿಗೆ ತೊಂದರೆಯಾಗದಂತೆ ಕರಾರು ಅವಧಿಯಲ್ಲಿ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಸಂಬಂಧಿಸಿದ ಗುತ್ತಿಗೆದಾರರಿಗೆ ಉಪ ವಿಭಾಗದಿಂದ ಈಗಾಗಲೇ ನೋಟೀಸ್ ನೀಡಲಾಗಿರುತ್ತದೆ. ಆದಷ್ಟು ಬೇಗನೆ ಕಾಮಗಾರಿ ಪೂರ್ಣಗೊಳಿಸಿ ಸಾರ್ವಜನಿಕ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗುವುದು.
ಇ)	ಕಾಮಗಾರಿ ವಿಳಂಬದಿಂದ ಸುತ್ತುಮುತ್ತಲಿನ ಸಾರ್ವಜನಿಕರಿಗೆ ದಿನನಿತ್ಯ ತಾಲ್ಲೂಕು ಕೇಂದ್ರಕ್ಕೆ ಓಡಾಡಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ತುರ್ತು ಕಾಮಕಾರಿಯನ್ನು ಗುಣಮಟ್ಟದಿಂದ ಯಾವಾಗ ಪೂರ್ಣಗೊಳಿಸಲಾಗುವುದು (ವಿವರ ನೀಡುವುದು)	
ಈ)	ಈ ಸಂಬಂಧ, ಸಂಬಂಧಪಟ್ಟ ಗುತ್ತಿಗೆದಾರರು, ಮತ್ತು ಇಲಾಖಾ ಅಧಿಕಾರಿಗಳ ವಿರುದ್ಧ ಕೈಗೊಳ್ಳಲಾದ ಶಿಸ್ತು ಕ್ರಮವೇನು? (ವಿವರ ನೀಡುವುದು)	

ಲೋಇ 24 ಸಿಕ್ಯೂಎನ್ 2021(ಇ)

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು,
ಲೋಕೋಪಯೋಗಿ ಇಲಾಖೆ